<u>ಅಸಲು ದಾವಾಃ</u>- 242/2021 ಪಿ.ಡಬ್ಲ್ಯೂಃ- 2

ದಿನಾಂಕಃ 17.09.2025 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಭೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲುಃ- ಪ್ರತಿವಾದಿಗಳ ಪರ ಶ್ರೀ.ಕೆ ಎಸ್ ಕೆ ವಕೀಲರಿಂದ</u>

1 ನೇ ವಾದಿಯ ಗಂಡ ಸುಮಾರು 40 ವರ್ಷಗಳಿಂದಲೂ ಶಿವಮೊಗ್ಗದಲ್ಲಿ ವಾಸವಿದ್ದರು ಎಂದರೆ ಸರಿ. 2 ನೇ ದಾವಾ ಆಸ್ತಿಯ ಸಂಖ್ಯೆ ಗೊತ್ತಿದೆಯಾ ಎಂದರೆ ಗೊತ್ತಿಲ್ಲ. 2 ನೇ ದಾವಾ ಆಸ್ತಿಯನ್ನು ಖರೀದಿ ಮಾಡುವ ಸಮಯದಲ್ಲಿ 1 ನೇ ವಾದಿಯ ಗಂಡ ಶಿವಮೊಗ್ಗದಲ್ಲಿ ವಾಸವಿದ್ದರು ಎಂದರೆ ಸಾಕ್ಷಿಯು ಕುಳಗಟ್ಟೆ ಯಲ್ಲಿ ಎಂದು ನುಡಿಯುತ್ತಾರೆ. ಯಾರು ಖರೀದಿ ಮಾಡಿರುತ್ತಾರೆ ಎನ್ನುವುದರ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ವಾದಿ, ಪ್ರತಿವಾದಿಗಳು ಸುಮಾರು 70 ವರ್ಷಗಳಿಂದಲೂ ಪ್ರತ್ಯೇಕವಾಗಿ ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿದ್ದರು ಎಂದರೆ ಸಾಕ್ಷಿಯು ಒಟ್ಟು ಕುಟುಂಬದಲ್ಲಿ ವಾಸಮಾಡುತ್ತಿದ್ದಾರೆ ಎಂದು ನುಡಿಯುತ್ತಾರೆ. ಎಷ್ಟು ವರ್ಷಗಳಿಂದ ವಾದಿ, ಪ್ರತಿವಾದಿಗಳು ಬೇರೆ ವಾಸವಿದ್ದಾರೆ ಎಂದರೆ ಸಾಕ್ಷಿ ಸುಮಾರು 30 ವರ್ಷಗಳಿಂದ ಎಂದು ನುಡಿಯುತ್ತಾರೆ. ಸಾಮಾನ್ಯವಾಗಿ ಒಟ್ಟು ಕುಟುಂಬದ ಸದಸ್ಯರು ಬೇರೆಯಾದ ನಂತರ ಅವರು ಖರೀದಿ ಮಾಡಿದ ಆಸ್ತಿಗಳು ಒಟ್ಟು ಕುಟುಂಬದ ಆಸ್ತಿಗಳಾಗುತ್ತವಾ ಅಥವಾ ಸ್ವಯಾರ್ಜಿತ ಆಸ್ತಿಗಳಾಗುತ್ತವಾ ಎಂದರೆ ಸಾಕ್ಷಿಯು ಸ್ವಯಾರ್ಜಿತ ಆಸ್ತಿಗಳಾಗುತ್ತವೆ ಎಂದು ನುಡಿಯುತ್ತಾರೆ.

2 ನೇ ದಾವಾ ಆಸ್ತಿಯು ಈಗ 1 ನೇ ಪ್ರತಿವಾದಿ ಮತ್ತು 2 ನೇ ಪ್ರತಿವಾದಿಯ ಗಂಡರವರ ಹೆಸರಿನಲ್ಲಿದೆ ಎಂದರೆ ಸಾಕ್ಷಿಯು ಒಟ್ಟು ಕುಟುಂಬದಲ್ಲಿ ಖರೀದಿ ಮಾಡಿರುತ್ತಾರೆ ಆದರೆ ಯಾರ ಹೆಸರಿಗಿದೆ ಎಂದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸುಮಾರು 1965-66 ನೇ ಸಾಲಿನಿಂದ ವಾದಿ , ಪ್ರತಿವಾದಿಗಳು ಪ್ರತ್ಯೇಕಗೊಂಡಿದ್ದರಿಂದ ದಾವಾ ಐಟಂ ನಂಬರ್ 2 ರ ಮೇಲೆ ವಾದಿಗಳಿಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ಹಾಕಿರುವ ತಕರಾರಿನ ಬಗ್ಗೆ ಗೊತ್ತಿದೆಯಾ ಎಂದರೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಅಂಶಗಳು ಗೊತ್ತಿದೆಯಾ

ಎಂದರೆ ಗೊತ್ತಿದೆ. ವಾದಿ , ಪ್ರತಿವಾದಿಗಳು ಬೇರೆ ಬೇರೆಯಾಗಿದ್ದರೂ ಸಹ ಪ್ರತಿವಾದಿಗಳ ಪರವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ